**All India Radio: Bangalore**
**National Bulletin In Kannada**
**05.05.2026  13.10 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**05.05.2026  13.10 hrs**

**<>><><*><><<>**

ಮುಖ್ಯಾಂಶಗಳು

**೧.	ಮೂರು ದಿನಗಳ ಭಾರತ ಭೇಟಿಗಾಗಿ ಇಂದು ವಿಯೇಟ್ನಾಂ ಅಧ್ಯಕ್ಷ ಟೊ ಲ್ಯಾಂ ಬಿಹಾರಕ್ಕೆ ಆಗಮನ**

**೨.	ಯುಎಇಯ ಫುಜೈರಾ ಪೆಟ್ರೋಲಿಯಂ ಕೈಗಾರಿಕಾ ವಲಯದ ಮೇಲಿನ ದಾಳಿ ಖಂಡಿಸಿದ ಭಾರತ ; ರಾಜತಾಂತ್ರಿಕ ಮಾರ್ಗ ಅನುಸರಿಸಲು ಕರೆ**

**೩.	ಭಾರತ-ಜಮೈಕಾ ಸಹಭಾಗಿತ್ವದಲ್ಲಿ ಅಭಿವೃದ್ಧಿ-ಸಹಕಾರವೇ ಆಧಾರಸ್ತಂಭ - ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್**

**೪.	ಪಶ್ಚಿಮ-ಏಷ್ಯಾ ಸಂಘರ್ಷ ೨೦೨೭ರವರೆಗೆ ಮುಂದುವರಿದರೆ, ಜಾಗತಿಕ ಆರ್ಥಿಕತೆಗೆ ಗಂಭೀರ ಪರಿಣಾಮ - ಐಎಂಎಫ್ ಕಳವಳ**

**೫.	ಭಾರತದ ಇಬ್ಬರು ಪತ್ರಕರ್ತರಿಗೆ ಪ್ರತಿಷ್ಠಿತ ಪುಲಿಟ್ಜರ್ ಪ್ರಶಸ್ತಿ ; ದೇಶದಲ್ಲಿ ಸೈಬರ್ ಅಪರಾಧ ಕುರಿತ ವರದಿಗಾಗಿ ಜಾಗತಿಕ ಮನ್ನಣೆ**

**<>><><*><><<>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ವಿಯೆಟ್ನಾಂ ಅಧ್ಯಕ್ಷ ಟೋ ಲಾಮ್ ಅವರು ಇಂದಿನಿಂದ ಭಾರತಕ್ಕೆ ಮೂರು ದಿನಗಳ ಅಧಿಕೃತ ಭೇಟಿ ನೀಡುತ್ತಿದ್ದು, ಇಂದು ಅವರು ಬಿಹಾರದ ಗಯಾಗೆ ಆಗಮಿಸಲಿದ್ದಾರೆ.  ಅವರೊಂದಿಗೆ ವಿಯೆಟ್ನಾಂ ಸರ್ಕಾರದ ಹಿರಿಯ ಸಚಿವರು, ಉನ್ನತ ಅಧಿಕಾರಿಗಳು ಹಾಗೂ ಉದ್ಯಮಿಗಳ ನಿಯೋಗವೂ ಆಗಮಿಸುತ್ತಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ನಾಳೆ ರಾಷ್ಟ್ರಪತಿ ಭವನದ ಮುಂಭಾಗದಲ್ಲಿ ಅಧ್ಯಕ್ಷ ಟೋ ಲಾಮ್ ಅವರಿಗೆ ಔಪಚಾರಿಕ ಸ್ವಾಗತ ಕೋರಲಾಗುವುದು. ತದನಂತರ, ಪ್ರಧಾನಿ ನರೇಂದ್ರ ಮೋದಿ ಅವರು ವಿಯೆಟ್ನಾಂ ಅಧ್ಯಕ್ಷರೊಂದಿಗೆ ದ್ವಿಪಕ್ಷೀಯ ಸಂಬಂಧಗಳು ಸೇರಿದಂತೆ ಪ್ರಾದೇಶಿಕ ಮತ್ತು ಜಾಗತಿಕ ಹಿತಾಸಕ್ತಿಯ ವಿವಿಧ ವಿಷಯಗಳ ಕುರಿತು ಸುದೀರ್ಘ ಚರ್ಚೆ ನಡೆಸಲಿದ್ದಾರೆ.  ಈ ಭೇಟಿಯ ಸಂದರ್ಭದಲ್ಲಿ ವಿಯೇಟ್ನಾಂ ಅಧ್ಯಕ್ಷರು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಲಿದ್ದು, ದೇಶದ ಇತರ ಪ್ರಮುಖ ನಾಯಕರೊಂದಿಗೂ ಮಾತುಕತೆ ನಡೆಸಲಿದ್ದಾರೆ.  ವಿಯೆಟ್ನಾಂ ಕಮ್ಯುನಿಸ್ಟ್ ಪಕ್ಷದ ಕೇಂದ್ರ ಸಮಿತಿಯ ಪ್ರಧಾನ ಕಾರ್ಯದರ್ಶಿಯೂ ಆಗಿರುವ ಅಧ್ಯಕ್ಷ ಟೋ ಲಾಮ್ ಅವರು ಅಧ್ಯಕ್ಷರಾಗಿ ಆಯ್ಕೆಯಾದ ನಂತರ ಭಾರತಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ.

**<>><><*><><<>**

ಯುಎಇಯ ಫುಜೈರಾ ಪೆಟ್ರೋಲಿಯಂ ಕೈಗಾರಿಕಾ ವಲಯದ ಮೇಲೆ ನಡೆದ ದಾಳಿಯನ್ನು ಭಾರತವು ತೀವ್ರವಾಗಿ ಖಂಡಿಸಿದೆ. ನಿನ್ನೆ ಈ ವಲಯದ ಮೇಲೆ ನಡೆದ ಡ್ರೋನ್ ದಾಳಿಯಿಂದಾಗಿ ಸಂಭವಿಸಿದ ಅಗ್ನಿ ಅವಘಡದಲ್ಲಿ ಮೂವರು ಭಾರತೀಯ ನಾಗರಿಕರು ಗಾಯಗೊಂಡಿದ್ದು, ಇಂತಹ ದಾಳಿಗಳು ಸ್ವೀಕಾರಾರ್ಹವಲ್ಲ ಎಂದು ಭಾರತ ತಿಳಿಸಿದೆ. ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ವಿದೇಶಾಂಗ ವ್ಯವಹಾರಗಳ ಸಚಿವಾಲಯ, ನಾಗರಿಕ ಮೂಲಸೌಕರ್ಯಗಳು ಮತ್ತು ಅಮಾಯಕ ಜನರನ್ನು ಗುರಿಯಾಗಿಸಿಕೊಂಡು ನಡೆಸುವ ದಾಳಿಗಳನ್ನು ಟೀಕಿಸಿದೆ.  ತಕ್ಷಣವೇ ಸಂಘರ್ಷವನ್ನು ನಿಲ್ಲಿಸಬೇಕೆಂದು ಕರೆ ನೀಡಿರುವ ಭಾರತವು, ಪಶ್ಚಿಮ ಏಷ್ಯಾದಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಮರುಸ್ಥಾಪಿಸಲು ಮಾತುಕತೆ ಹಾಗೂ ರಾಜತಾಂತ್ರಿಕ ಮಾರ್ಗಗಳನ್ನೇ ಅನುಸರಿಸಬೇಕು ಎಂದು ಪ್ರತಿಪಾದಿಸಿದೆ. ಯುಎಇ ನಲ್ಲಾಗಿರುವ ದಾಳಿಯಲ್ಲಿ ಭಾರತೀಯ ನಾಗರಿಕರು ಗಾಯಗೊಂಡಿರುವ ಕುರಿತು ಪ್ರಧಾನಿ ನರೇಂದ್ರ ಮೋದಿ ಖಂಡನೆ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ, ಈ ಕುರಿತು ಪ್ರತಿಕ್ರಿಯಿಸಿದ್ದು, ಪ್ರಾದೇಶಿಕ ಶಾಂತಿ ಸ್ಥಿರತೆ ಮತ್ತು ಜಾಗತಿಕ ಇಂಧನ ಭದ್ರತೆಗೆ ಹಾರ್ಮುಜ್ ಜಲಸಂಧಿಯಲ್ಲಿ ಸುರಕ್ಷಿತ ಸಮುದ್ರಯಾನ ಖಚಿತಪಡಿಸಬೇಕು ಎಂದಿದ್ದಾರೆ.

**<>><><*><><<>**

ಭಾರತ ಮತ್ತು ಜಮೈಕಾ ನಡುವಿನ ಸಹಭಾಗಿತ್ವದಲ್ಲಿ ಅಭಿವೃದ್ಧಿ ಸಹಕಾರವು ಅತ್ಯಂತ ಪ್ರಮುಖ ಆಧಾರಸ್ತಂಭವಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಅವರು ತಿಳಿಸಿದ್ದಾರೆ. £À ಜಮೈಕಾದ ವಿದೇಶಾಂಗ ಸಚಿವೆ ಕಮಿನಾ ಜಾನ್ಸನ್ ಸ್ಮಿತ್ ಹಾಗೂ ಅಲ್ಲಿನ ಸಚಿವ ಸಂಪುಟದ ಸದಸ್ಯರೊಂದಿಗೆ ನಡೆಸಿದ ಸಮಗ್ರ ಸಭೆಯ ನಂತರ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಅವರು, ಉಭಯ ದೇಶಗಳ ನಡುವೆ ಡಿಜಿಟಲ್ ಪರಿವರ್ತನೆ, ಸಾಂಸ್ಕೃತಿಕ ವಿನಿಮಯ, ಕ್ರೀಡೆ ಮತ್ತು ಡಿಜಿಟಲ್ ಪಾವತಿ ಕ್ಷೇತ್ರಗಳಲ್ಲಿನ ಸಹಕಾರವನ್ನು ಬಲಪಡಿಸಲು ಹಲವು ಪ್ರಮುಖ ಒಪ್ಪಂದಗಳಿಗೆ ಸಹಿ ಹಾಕಲಾಗಿದೆ ಎಂದರು. ಇದೇ ಸಂದರ್ಭದಲ್ಲಿ ಕಿಟ್ಸನ್ ಟೌನ್‌ನಲ್ಲಿ ಭಾರತದ ಒಂದು ದಶಲಕ್ಷ ಡಾಲರ್ ನೆರವಿನೊಂದಿಗೆ ಪೂರ್ಣಗೊಂಡಿರುವ ಗ್ರಾಮೀಣ ಜೀವನೋಪಾಯ ಸುಧಾರಣಾ ಯೋಜನೆಯನ್ನು ಸಚಿವರು ಶ್ಲಾಘಿಸಿದರು. ಈ ಯೋಜನೆಯು ಸಾವಿರಾರು ಜನರಿಗೆ ಅನುಕೂಲ ಕಲ್ಪಿಸಿದ್ದು, ಮೆಲಿಸ್ಸಾ ಚಂಡಮಾರುತದ ನಂತರ ಜಮೈಕಾದ ಪುನರ್ನಿರ್ಮಾಣ ಕಾರ್ಯದಲ್ಲಿ ಭಾರತವು ಸಕ್ರಿಯವಾಗಿ ಬೆಂಬಲ ನೀಡುತ್ತಿದೆ ಎಂದು ತಿಳಿಸಿದರು. ಇದರ ಜೊತೆಗೆ ಭಾರತ-ಕ್ಯಾರಿಕಾಮ್ ಅಭಿವೃದ್ಧಿ ಪಾಲುದಾರಿಕೆಯ ಅಡಿಯಲ್ಲಿ ಜಮೈಕಾದಲ್ಲಿ 'ಕುಶಲಕರ್ಮಿಗಳ ಸಬಲೀಕರಣ ಕೇಂದ್ರ'ವನ್ನು ಸ್ಥಾಪಿಸುವ ಕುರಿತು ಸದ್ಯ ಮಾತುಕತೆಗಳು ನಡೆಯುತ್ತಿವೆ ಎಂದು ಸಚಿವ ಡಾ.ಜೈಶಂಕರ್ ಮಾಹಿತಿ ನೀಡಿದರು.

<>><><*><><<>

ಪಶ್ಚಿಮ ಏಷ್ಯಾದಲ್ಲಿ ಉಂಟಾಗಿರುವ ಪರಿಸ್ಥಿತಿಯ ನಡುವೆಯೂ ದೇಶದ ಯಾವುದೇ ಎಲ್‌ಪಿಜಿ ವಿತರಣಾ ಕೇಂದ್ರಗಳಲ್ಲಿ ದಾಸ್ತಾನು ಕೊರತೆಯಾಗಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ. ಪೆಟ್ರೋಲಿಯಂ ಉತ್ಪನ್ನಗಳು ಮತ್ತು ಎಲ್‌ಪಿಜಿ ಸಿಲಿಂಡರ್‌ಗಳ ನಿರಂತರ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಸರ್ಕಾರ ಭರವಸೆ ನೀಡಿದೆ. ನವದೆಹಲಿಯಲ್ಲಿ ನಡೆದ ಅಂತರ್-ಸಚಿವಾಲಯದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅಧಿಕಾರಿಗಳು, ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿ ಖರೀದಿಯ ವಿಷಯದಲ್ಲಿ ಸಾರ್ವಜನಿಕರು ಆತಂಕಕ್ಕೆ ಒಳಗಾಗಬಾರದು ಹಾಗೂ ಅಧಿಕೃತ ಮೂಲಗಳ ಮಾಹಿತಿಯನ್ನು ಮಾತ್ರ ನಂಬಬೇಕು ಎಂದು ಮನವಿ ಮಾಡಿದ್ದಾರೆ.

<>><><*><><<>

ದೇಶದಲ್ಲಿ ಪ್ರಬಲ ಸಂಶೋಧನೆ ಮತ್ತು ನಾವೀನ್ಯತೆಯ ವ್ಯವಸ್ಥೆ ನಿರ್ಮಿಸಲು ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಪುನರುಚ್ಚರಿಸಿದ್ದಾರೆ. ನವದೆಹಲಿಯಲ್ಲಿಂದು ನಡೆದ 'ಐಐಟಿ ಮದ್ರಾಸ್ ತಂತ್ರಜ್ಞಾನ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ದೇಶದ ಸಂಶೋಧನಾ ಕ್ಷೇತ್ರವು ಕೇವಲ ಪಿಎಚ್‌ಡಿ ಪ್ರಬಂಧಗಳು ಅಥವಾ ಶೈಕ್ಷಣಿಕ ಪ್ರಕಟಣೆಗಳಿಗೆ ಸೀಮಿತವಾಗಬಾರದು ಎಂದು ಆಶಿಸಿದರು.

ಸಂಶೋಧನೆಗಳು ಸಮಾಜಕ್ಕೆ ಪ್ರಯೋಜನಕಾರಿಯಾದ ಮತ್ತು ಕಾರ್ಯರೂಪಕ್ಕೆ ತರಬಹುದಾದ ಆವಿಷ್ಕಾರಗಳಾಗಿ ಪರಿವರ್ತನೆಯಾಗಬೇಕು. ಆ ಮೂಲಕ 'ವಿಕಸಿತ ಭಾರತ'ದ ಗುರಿ ತಲುಪಲು ಪೂರಕವಾದ ಫಲಿತಾಂಶಗಳನ್ನು ನೀಡುವತ್ತ ನಾವು ಗಮನಹರಿಸಬೇಕು ಎಂದು ಸಚಿವರು ಒತ್ತು ನೀಡಿದರು.

<>><><*><><<>

ಪಶ್ಚಿಮ ಏಷ್ಯಾದ ಸಂಘರ್ಷವು ೨೦೨೭ರವರೆಗೆ ಮುಂದುವರಿದರೆ ಜಾಗತಿಕ ಆರ್ಥಿಕತೆಯು ಅತ್ಯಂತ ಗಂಭೀರ ಪರಿಣಾಮಗಳನ್ನು ಎದುರಿಸಬೇಕಾಗಬಹುದು ಎಂದು ಅಂತರರಾಷ್ಟ್ರೀಯ ಹಣಕಾಸು ನಿಧಿ-ಐಎಂಎಫ್ ಎಚ್ಚರಿಸಿದೆ. ಈ ಸಂಘರ್ಷದ ಹಿನ್ನೆಲೆಯಲ್ಲಿ ಕಚ್ಚಾ ತೈಲದ ಬೆಲೆಯು ಪ್ರತಿ ಬ್ಯಾರೆಲ್‌ಗೆ ಸುಮಾರು ೧೨೫ ಡಾಲರ್‌ಗೆ ಏರಿಕೆಯಾಗುವ ಸಾಧ್ಯತೆಯಿದೆ ಎಂದು ಐಎಂಎಫ್ ಅಂದಾಜಿಸಿದೆ. ಪ್ರಸ್ತುತ ಚಾಲ್ತಿಯಲ್ಲಿರುವ ದೀರ್ಘಕಾಲದ ಸಂಘರ್ಷ, ತೈಲ ಬೆಲೆಗಳು ೧೦೦ ಡಾಲರ್ ಅಥವಾ ಅದಕ್ಕಿಂತ ಹೆಚ್ಚಿನ ಮಟ್ಟದಲ್ಲಿ ಮುಂದುವರಿಯುತ್ತಿರುವುದು ಮತ್ತು ಹೆಚ್ಚುತ್ತಿರುವ ಹಣದುಬ್ಬರದ ಒತ್ತಡಗಳು ಈಗಾಗಲೇ ಐಎಂಎಫ್‌ನ 'ಪ್ರತಿಕೂಲ ಸನ್ನಿವೇಶ'ದ ಮುನ್ಸೂಚನೆಗಳನ್ನು ಸಕ್ರಿಯಗೊಳಿಸಿವೆ ಎಂದು ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಕ್ರಿಸ್ಟಲಿನಾ ಜಾರ್ಜೀವಾ ತಿಳಿಸಿದ್ದಾರೆ. ಈ ಪ್ರತಿಕೂಲ ಸನ್ನಿವೇಶದ ಅಡಿಯಲ್ಲಿ, ೨೦೨೬ರಲ್ಲಿ ಜಾಗತಿಕ ಆರ್ಥಿಕ ಬೆಳವಣಿಗೆಯ ದರವು ಶೇಕಡಾ ೨.೫ಕ್ಕೆ ಕುಸಿಯುವ ನಿರೀಕ್ಷೆಯಿದೆ. ಇದೇ ಸಮಯದಲ್ಲಿ ಜಾಗತಿಕ ಹಣದುಬ್ಬರ ಪ್ರಮಾಣವು ಶೇಕಡಾ ೫.೪ಕ್ಕೆ ಏರಿಕೆಯಾಗಬಹುದು ಎಂದು ಐಎಂಎಫ್ ವರದಿ ಮಾಡಿದೆ.

<>><><*><><<>

ಹಾರ್ಮುಜ್ ಜಲಸಂಧಿಯ ನಿಯಂತ್ರಣಕ್ಕಾಗಿ ಅಮೆರಿಕ ಮತ್ತು ಇರಾನ್ ನಡುವೆ ದಾಳಿಗಳು ತೀವ್ರಗೊಂಡಿದ್ದು, ಈಗಾಗಲೇ ಜಾರಿಯಲ್ಲಿದ್ದ ದುರ್ಬಲ ಕದನ ವಿರಾಮವು ಅಂತ್ಯಗೊಂಡಂತಾಗಿದೆ. ಜಲಸಂಧಿಯಲ್ಲಿ ಸಿಲುಕಿರುವ ಹಡಗುಗಳ ರಕ್ಷಣೆಗಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ 'ಪ್ರಾಜೆಕ್ಟ್ ಫ್ರೀಡಂ' ಘೋಷಿಸಿದ ಬೆನ್ನಲ್ಲೇ ಕ್ಷಿಪಣಿ ಮತ್ತು ಡ್ರೋನ್ ದಾಳಿಗಳು ನಡೆದಿವೆ. ಅಮೆರಿಕದ ದಾಳಿಯಲ್ಲಿ ಇರಾನ್‌ನ ಆರು ಮಿಲಿಟರಿ ದೋಣಿಗಳು ನಾಶವಾಗಿದ್ದು, ಐವರು ನಾಗರಿಕರು ಸಾವನ್ನಪ್ಪಿದ್ದಾರೆ. ಇದಕ್ಕೆ ಪ್ರತಿಯಾಗಿ ಇರಾನ್ ನಡೆಸಿದ ದಾಳಿಯಿಂದಾಗಿ ಯುಎಇ ತೈಲ ಬಂದರಿನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಈ ಸಂಘರ್ಷಕ್ಕೆ ಮಿಲಿಟರಿ ಕ್ರಮದಿಂದ ಪರಿಹಾರ ಸಾಧ್ಯವಿಲ್ಲ ಎಂದು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಕ್ಚಿ ತಿಳಿಸಿದ್ದು, ಸಂಘರ್ಷದಲ್ಲಿ ಅತಿಯಾಗಿ ತೊಡಗಿಸಿಕೊಳ್ಳದಂತೆ ಅಮೆರಿಕ ಮತ್ತು ಯುಎಇಗೆ ಎಚ್ಚರಿಕೆ ನೀಡಿದ್ದಾರೆ. ಅಮೆರಿಕವು ತನ್ನ ನೌಕಾಪಡೆಯ ರಕ್ಷಣೆಯಲ್ಲಿ ವಾಣಿಜ್ಯ ಹಡಗುಗಳು ಜಲಸಂಧಿಯನ್ನು ದಾಟಿವೆ ಎಂದು ಪ್ರತಿಪಾದಿಸಿದರೆ, ಇರಾನ್ ಇದನ್ನು ನಿರಾಕರಿಸಿದೆ. ಕಳೆದ ಫೆಬ್ರವರಿಯಿಂದ ನಡೆಯುತ್ತಿರುವ ಈ ಸಂಘರ್ಷದಲ್ಲಿ ಈಗಾಗಲೇ ಸಾವಿರಾರು ಜನರು ಪ್ರಾಣ ಕಳೆದುಕೊಂಡಿದ್ದು, ಇತ್ತೀಚಿನ ಶಾಂತಿ ಮಾತುಕತೆಗಳು ಯಾವುದೇ ಒಪ್ಪಂದವಿಲ್ಲದೆ ಮುಕ್ತಾಯಗೊಂಡಿವೆ.

**<>><><*><><<>**

ಈ ಬಾರಿಯ ಪ್ರತಿಷ್ಠಿತ ಪುಲಿಟ್ಜರ್ ಪ್ರಶಸ್ತಿಗೆ ಇಬ್ಬರು ಭಾರತದ ಪತ್ರಕರ್ತರು ಭಾಜನರಾಗಿದ್ದಾರೆ. ದೇಶದಲ್ಲಿ ನಡೆಯುತ್ತಿರುವ ಸೈಬರ್ ಅಪರಾಧಗಳ ಕುರಿತಾದ ವರದಿಗಾಗಿ ಆನಂದ್ ಆರ್.ಕೆ. ಮತ್ತು ಸುಪರ್ಣಾ ಶರ್ಮಾ ಅವರಿಗೆ 'ಇಲಸ್ಟ್ರೇಟೆಡ್ ರಿಪೋರ್ಟಿಂಗ್ ಮತ್ತು ಕಮೆಂಟ್ರಿ' ವಿಭಾಗದಲ್ಲಿ ಈ ಪ್ರಶಸ್ತಿ ಲಭಿಸಿದೆ. ಇವರು ನಟಾಲಿ ಒಬಿಕೊ ಪಿಯರ್ಸನ್ ಅವರೊಂದಿಗೆ ಬ್ಲೂಮ್‌ಬರ್ಗ್ ಸಂಸ್ಥೆಗಾಗಿ ನೀಡಿದ ವರದಿಗೆ ಈ ಪ್ರಶಸ್ತಿ ಪಡೆದಿದ್ದಾರೆ. ಇದರ ಜೊತೆಗೆ ಅಮೆರಿಕದ ಗಡಿ ಕಣ್ಗಾವಲು ತಂತ್ರಜ್ಞಾನದ ಕುರಿತಾದ ತನಿಖಾ ವರದಿಗಾಗಿ ಅನೌಹ್ ಮೂಲದ ವರದಿಗಾರ ಅನಿರುದ್ಧ ಘೋಷಾಲ್ ಅವರು ಅಂತಾರಾಷ್ಟ್ರೀಯ ವರದಿಗಾರಿಕೆ ವಿಭಾಗದಲ್ಲಿ ಪ್ರಶಸ್ತಿ ಗೆದ್ದಿದ್ದಾರೆ. ಪತ್ರಿಕೋದ್ಯಮ ಕ್ಷೇತ್ರದ ಅತ್ಯುನ್ನತ ಗೌರವ ಎಂದು ಪರಿಗಣಿಸಲಾದ ಈ ಪ್ರಶಸ್ತಿಗಳನ್ನು ಅಮೆರಿಕದ ಕೊಲಂಬಿಯಾ ವಿಶ್ವವಿದ್ಯಾಲಯದ ಗ್ರ್ಯಾಜುಯೇಟ್ ಸ್ಕೂಲ್ ಆಫ್ ಜರ್ನಲಿಸಂ ಘೋಷಿಸಿದೆ.

**<>><><*><><<>**

ಕೇಂದ್ರ ವಿದೇಶಾಂಗ ವ್ಯವಹಾರಗಳ ಖಾತೆ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಅವರು ಫಿಲಿಪೈನ್ಸ್‌ನ ವಲಸೆ ಕಾರ್ಮಿಕರ ಇಲಾಖೆಯ ಕಾರ್ಯದರ್ಶಿ ಹ್ಯಾನ್ಸ್ ಲಿಯೋ ಕಾಕ್ಡಾಕ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು ತಮ್ಮ ಭೇಟಿಯ ಅವಧಿಯಲ್ಲಿ ಉಭಯ ರಾಷ್ಟ್ರಗಳ ನಡುವಿನ ವಲಸೆ ಮತ್ತು ಸಂಚಾರಕ್ಕೆ ಸಂಬಂಧಿಸಿದ ಹಂಚಿಕೆಯ ಸಮಸ್ಯೆಗಳು ಮತ್ತು ಈ ಕ್ಷೇತ್ರಗಳಲ್ಲಿನ ಸಹಕಾರದ ಕುರಿತು ಚರ್ಚಿಸಲಾಗಿದೆ ಎಂದು ತಿಳಿಸಿದ್ದಾರೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**